ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

18

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE 22/7/2020

# ಸಾಮಾಜಿಕ ಅಂತರಕ್ಕೆ ಲೋಕ, ರಾಜ್ಯಸಭೆ ಪ್ರತ್ಯೇಕ ಕಲಾಪ ?

22/7

**ನವದೆಹಲಿ:** ಕೊರೋನಾ ಹಿನ್ನೆಲೆ ಸಂಸತ್ತಿನ ಮುಂಗಾರು ಅಧಿವೇಶನದ ವೇಳೆ ಲೋಕಸಭೆ ಮತ್ತು ರಾಜ್ಯಸಭೆ ಕಲಾಪವನ್ನು ಪ್ರತ್ಯೇಕವಾಗಿ ನಡೆಸುವ ಸಾಧ್ಯತೆ ಇದೆ. ಜೊತೆಗೆ ಲೋಕಸಭೆ ಕಲಾಪದ ವೇಳೆ, ರಾಜ್ಯಸಭೆಯ ಹಾಲ್ ಅನ್ನು ಬಳಸಿಕೊಳ್ಳುವ ಸಾಧ್ಯತೆ ಇದೆ. ಹೀಗೆ ಮಾಡಿದಲ್ಲಿ ಸಾಮಾಜಿಕ ಅಂತರ ಕಾಪಾಡಿಕೊಳ್ಳಬಹುದು ಎಂಬ ಚಿಂತನೆ ಸರ್ಕಾರದ್ದು. ಈ ಸಂಬಂಧ ರಾಜ್ಯಸಭಾ ಸಭಾಪತಿ ಎಂ. ವೆಂಕಯ್ಯನಾಯ್ಡು ಹಾಗೂ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮಾತುಕತೆ ವೇಳೆ ಈ ವಿಷಯ ಚರ್ಚೆಗೆ ಬಂದಿದೆ. ಸಾಮಾಜಿಕ ಅಂತರ ಕಲ್ಪಿಸಿದರೆ ರಾಜ್ಯಸಭೆ ಹಾಲ್‌ನಲ್ಲಿ 127, ಲೋಕಸಭೆ ಹಾಲ್‌ನಲ್ಲಿ 290 ಸದಸ್ಯರಿಗೆ ಅವಕಾಶ ಕಲ್ಪಿಸಬಹುದು.